**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು, ದಿನಾಂಕಃ28.08.2025.</u>**

**<u>ಮುಖ್ಯ ವಿಚಾರಣೆಃ- ಪಿರ್ಯಾದಿದಾರರ ಪರ ವಕೀಲರಿಂದಃ-</u>**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಈಗಾಗಲೇ ನ್ಯಾಯಾಲಯದ ಮುಂದೆ ಸಲ್ಲಿಸಿರುವ ಸ್ವಹಿಚ್ಚಾ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲು ಕೋರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ. ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಪಿರ್ಯಾದಿಗೆ ಸಂಬಂಧಪಟ್ಟ ದಾಖಲೆಗಳು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ಈಗ ನೋಡುತ್ತಿರುವ ಚೆಕ್ ಆರೋಪಿ ನನಗೆ ನೀಡಿದ ಪ್ರಗತಿ ಕೃಷ್ಣ ಗ್ರಾಮೀಣ ಬ್ಯಾಂಕ್ ಚೆಕ್ ಇರುತ್ತದೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಚೆಕ್ ನ್ನು ನಿ.ಪಿ.**1** ಎಂದು ಗುರುತಿಸಲಾಯಿತು. ಸದರಿ ಚೆಕ್ ನಲ್ಲಿ ಇರುವ ಆರೋಪಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.**1(**ಎ**)** ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ **SBI** ಬ್ಯಾಂಕ್, ಬ್ರಾಂಚ್ ಜಗಳೂರು ಇವರು ನೀಡಿದ ಮೆಮೋವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.**2** ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ನಾನು ಆರೋಪಿಗೆ ನೀಡಿದ ಲೀಗಲ್ ನೋಟೀಸಿನ ದಿಃ **28.09.2022** ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.**3** ಎಂದು ಗುರುತಿಸಲಾಯಿತು ಮತ್ತು ಅದಕ್ಕೆ ಸಂಬಂದಪಟ್ಟ **2** ಅಂಚೆ ರಶೀದಿಯನ್ನು ಒಂದು ಅಂಚೆ ಸ್ವೀಕೃತಿಯನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.**4** ರಿಂದ **6** ಎಂದು ಗುರುತಿಸಲಾಯಿತು.

ನನ್ನ ಪಿರ್ಯಾದಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದಃ-

(ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ, ಪಾಟೀ ಸವಾಲು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**Sd/-**

ಸಿವಿಲ್ ನ್ಯಾಯಾಧೀಶರು, ಜಗಳೂರು